ಪ್ರ-72 (87)

# ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) ಇವರು ನಿಯಮ–72ರಡಿ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ.

| ಸೂಚನೆ | ಉತ್ತರ |
|---|---|
| ಬೆಂಗಳೂರಿನ ನೈಸ್ ರಸ್ತೆಯಲ್ಲಿ ಫಾಸ್ಟ್ ಟ್ಯಾಗ್ ಅಳವಡಿಸದೇ ಇರುವುದರಿಂದ ವಾಹನಗಳು ಗಂಟೆಗಟ್ಟಲೆ ಕ್ಯೂ ನಿಲ್ಲುವ ಪರಿಸ್ಥಿತಿ ಇರುವುದರಿಮದ ಸರ್ಕಾರವು ಕೂಡಲೇ ನೈಸ್ ರಸ್ತೆಯಲ್ಲಿ ಫಾಸ್ಟ್ ಟ್ಯಾಗನ್ನು ಅಳವಡಿಸಿ ವಾಹನ ಸವಾರರಿಗೆ ಅನುಕೂಲವಾಗುವ ಬಗ್ಗೆ ಮಾನ್ಯ ಉಪ ಮುಖ್ಯ ಮಂತ್ರಿ ಮತ್ತು ಲೋಕೋಪಯೋಗಿ ಸಚಿವರ ಗಮನ ಸೆಳೆಯ ಬಯಸುತ್ತೇನೆ. | ಸರ್ಕಾರ ಮತ್ತು ನೈಸ್ ಸಂಸ್ಥೆಯೊಂದಿಗೆ ದಿನಾಂಕ 03.04.1997ರ ಕ್ರಿಯಾ ಒಪ್ಪಂದದಲ್ಲಿ ಯೋಜನಾ ಪ್ರವರ್ಥಕ ಸಂಸ್ಥೆಯಾದ ಮೆ: ನೈಸ್ ಸಂಸ್ಥೆಯು ಕಾಂಕ್ರೀಟ್ ರಸ್ತೆ ಮಾಡಿದ ಮೇಲೆ ಟೋಲ್ ಶುಲ್ಕವನ್ನು ಸಂಗ್ರಹಿಸಲು ತಿಳಿಸಲಾಗಿರುತ್ತದೆ. ಆದರೆ ನೈಸ್ ಸಂಸ್ಥೆಯು ಕಾಂಕ್ರೀಟ್ ರಸ್ತೆ ಬದಲಿಗೆ ಡಾಂಬರ್ ರಸ್ತೆಯನ್ನು ನಿರ್ಮಿಸಿ ಕ್ರಿಯಾ ಒಪ್ಪಂದದ ಸೆಕ್ಷನ್ 6.6.3 ನ್ನು ಉಲ್ಲಂಘಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಕ್ರಿಯಾ ಒಪ್ಪಂದದ ಸೆಕ್ಷನ್ 16.2ರನ್ವಯ ಸರ್ಕಾರದಿಂದ ಡಿಫಾಲ್ಟ್ ನೋಟೀಸ್‌ನ್ನು ದಿನಾಂಕ 5–2–2016ರಂದು ನೈಸ್ ಸಂಸ್ಥೆಗೆ ನೀಡಲಾಗಿದೆ. ಆದರೆ ಸದರಿ ಡಿಫಾಲ್ಟ್ ನೋಟೀಸ್ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ. 12109–10/2016 ಅನ್ನು ದಾಖಲಿಸಿ ತಡೆಯಾಜ್ಞೆ ತಂದಿರುತ್ತಾರೆ. ಪ್ರಕರಣ ಮಾನ್ಯ ನ್ಯಾಯಾಲಯದಲ್ಲಿ ಬಾಕಿ ಇದ್ದು, ಪ್ರಕರಣ ಇತ್ಯರ್ಥವಾದ ನಂತರ ಈ ಬಗ್ಗೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. |

ಸಂಖ್ಯೆ: ಲೋಇ 197 ಸಿಆರ್‌ಎಂ 2021

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯ ಮಂತ್ರಿಗಳು ಹಾಗೂ
ಲೋಕೋಪಯೋಗಿ ಸಚಿವರು